ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸಕಾಅ/ವಾ.ನಂ.41/ಪಿಆರ್/03/2020-21

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಪೀಣ್ಯ ಕೈಗಾರಿಕಾ ಪ್ರದೇಶ ಉಪವಿಭಾಗ, ದಾಸರಹಳ್ಳಿ ವಲಯ
ಹೆಚ್.ಎಂ.ಟಿ.ಬಡಾವಣೆ, ನಾಗಸಂದ್ರ ಪೋಸ್ಟ್
ಬೆಂಗಳೂರು. ದಿನಾಂಕ : 07-11-2020

## ವಾರ್ಡ್ –41ರ ವಾರ್ಡ್ ಸಭೆಯ ನಡವಳಿ

ದಿನಾಂಕ:-7-11-2020 ರಂದು ಪೀಣ್ಯ ಕೈಗಾರಿಕ ಪ್ರದೇಶ ಉಪ ವಿಭಾಗ ವಾರ್ಡ್ ನಂ.41 ರ ವಾರ್ಡ್ ಕಛೇರಿಯಲ್ಲಿ ಶ್ರೀ.ಪ್ರಭು.ಕೆ. ವಾರ್ಡ್–41 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

1. ಶ್ರೀ ಪ್ರಭು.ಕೆ. ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ನರಸಿಂಹಮೂರ್ತಿ ನಾಯಕ್ಕ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು
3. ಶ್ರೀ ಜಗದೀಶ್.ಹೆಚ್. ಹಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.41) ಮತ್ತು ಸದಸ್ಯರು.
4. ಶ್ರೀ.ಸಮಿಉಲ್ಲಾ. ತೋಟಗಾರಿಕೆ ಇಲಾಖೆ ದಾಸರಹಳ್ಳಿ ವಲಯ
5. ಶ್ರೀ.ಚೌಡಪ್ಪ. ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ
6. ಕಿರಣ್.ಆರ್. ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ
7. ಪಿ.ಸುರೇಶ್. ಸದಸ್ಯರು. ಗೃಹಲಕ್ಷ್ಮಿ ಬಡಾವಣೆ
8. ಮಂಜುನಾಥ್. ಸದಸ್ಯರು. ಗೃಹಲಕ್ಷ್ಮಿ ಬಡಾವಣೆ
9. ಕುಮಾರ್.ಬಿ.ಎಸ್. ಸದಸ್ಯರು. ಗೃಹಲಕ್ಷ್ಮಿ ಬಡಾವಣೆ
10. ಭಾಗ್ಯ. ಹಿಂದಿನ ಮಹಿಳಾ ಸರ್ವಧರ್ಮಗಳ ಸಂಘ (ರಿ)
11. ಸರಸ್ವತಿ. ಹಿಂದಿನ ಮಹಿಳಾ ಸರ್ವಧರ್ಮಗಳ ಸಂಘ (ರಿ)
12. ಅರುಣ.ಕರ್ನಾಟಕ ಶಕ್ತಿ ಅಭಿವೃದ್ಧಿ ಮಹಿಳಾ ಸಂಘ
13. ರಾಧ. ಕರ್ನಾಟಕ ಶಕ್ತಿ ಅಭಿವೃದ್ಧಿ ಮಹಿಳಾ ಸಂಘ

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು ಸಭೆಯನ್ನು ಪ್ರಾರಂಭಿಸಲಾಯಿತು.

- ವಾರ್ಡಿನ ಆರೋಗ್ಯ ಪರಿವೀಕ್ಷಕರು ಕೋವಿಡ್–19 ರ ಬಗ್ಗೆ ಚರ್ಚಿಸಿ ಒಟ್ಟು +Veಕೇಸ್ 960 ಒಟ್ಟು ಬಿಡುಗಡೆ –693 ಒಟ್ಟು ಆಕ್ಟಿವ್ ಕೇಸ್–261 ಇರುತ್ತದೆ ಎಂದು ಸಭೆಗೆ ತಿಳಿಸಿದರು.
- ಸ್ತ್ರೀ ಶಕ್ತಿ ಸಂಘದವರಿಗೆ ಕೋವಿಡ್ ಟೆಸ್ಟ್ ಕ್ಯಾಂಪ್ ಹಮ್ಮಿಕೊಳ್ಳಲು ಸದರಿ ಪ್ರದೇಶದ ನಿವಾಸಿಗಳಿಗೆ ಕೋವಿಡ್ ಟೆಸ್ಟ್ ಮಾಡಿಸಲು ಅರಿವು ಮೂಡಿಸಲು ಸೂಚಿಸಿದರು
- ಮಾಸ್ಕ್ ಧರಿಸದ ಸಾರ್ವಜನಿಕರಿಗೆ ದಂಡ ವಿಧಿಸುವುದು ಹಾಗೂ ಮಾಸ್ಕ್ ಧರಿಸುವಂತೆ ಮತ್ತು ಸಾಮಾಜಿಕ ಅಂತರ ಕಾಪಾಡಿಕೊಳ್ಳಲು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸವನ್ನು ಲಿಂಕ್ ವರ್ಕರ್‌ಗಳು ಕ್ರಮ ಕೈಗೊಳ್ಳಲು ಮಾನ್ಯ ಅಧ್ಯಕ್ಷರು ಸೂಚಿಸಿದರು.
- ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆ ಗುಂಡಿಗಳನ್ನು ಕೂಡಲೇ ಮುಚ್ಚುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಿದರು.
- ವಸತಿ ಪ್ರದೇಶಗಳಲ್ಲಿ ಬಳಕೆಯಾಗದೇ ಇರುವ ವಾಹನಗಳನ್ನು ನಿಲ್ಲಿಸಿ ವಾಹನ ಮತ್ತು ಸಾರ್ವಜನಿಕ ಸಂಚಾರಕ್ಕೆ ಅಡಚಣೆಯಾಗುತ್ತಿರುವ ವಾಹನಗಳನ್ನು ಕೂಡಲೇ ತೆರವುಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಲು ಪೀಣ್ಯ ಪೊಲೀಸ್ ಠಾಣೆ ರವರಿಗೆ ತಿಳಿಸಲು ಕಾರ್ಯದರ್ಶಿಗಳಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿರುವ ಡೆಬ್ರಿಸ್‌ಗಳನ್ನು ಕೂಡಲೇ ತೆರವುಗೊಳಿಸುವಂತೆ ಮಾನ್ಯ ಅಧ್ಯಕ್ಷರು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿರುವ ಮುಖ್ಯರಸ್ತೆಗಳಲ್ಲಿ ಪಾದಚಾರಿ ಮಾರ್ಗದಲ್ಲಿ ಅನಧಿಕೃತವಾಗಿ ಇಟ್ಟಿರುವ ಸಾಮಾಗ್ರಿಗಳನ್ನು ತೆರುಗೊಳಿಸಲು ಸೂಚಿಸಿದರು.

ಪು.ಸಿ.ನೋ

Scanned by CamScanner

- ವಾರ್ಡ್ ವ್ಯಾಪ್ತಿಯ ಗೃಹಲಕ್ಷ್ಮಿ ಬಡಾವಣೆಯಲ್ಲಿ ಮ್ಯಾನ್ ಹೋಲ್ ತುಂಬಿ ಹರಿಯುತ್ತಿರುವುದು ಹಾಗೂ ನೀರು ಪೋಲಾಗಿ ಹರಿಯುತ್ತಿರುವುದರ ಬಗ್ಗೆ ಕ್ರಮ ವಹಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಮ್ಯಾನ್ ಹೋಲ್ ವಿವರಗಳನ್ನು ನೀಡಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಕಸದ ಬ್ಲಾಕ್ ಸ್ಪಾಟ್‌ಗಳನ್ನು ಕ್ರಮೇಣ ಕಡಿಮೆ ಮಾಡಲು ಮಾನ್ಯ ಅಧ್ಯಕ್ಷರು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಎಲ್ಲಾ ಪ್ರದೇಶಗಳ್ಲ ಸೊಳ್ಳೆ ಔಷದಿ ಸಿಂಪಡಿಸಲು ಮಾನ್ಯ ಅಧ್ಯಕ್ಷರು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.
- ಗೃಹಲಕ್ಷ್ಮಿ ಬಡಾವಣೆಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು ನಿಯಂತ್ರಿಸಲು ಸದರಿ ಬಡಾವಣೆಯ ನಿವಾಸಿಗಳು ಸಭೆಯಲ್ಲಿ ಕೋರಿರುತ್ತಾರೆ. ಮಾನ್ಯ ಅಧ್ಯಕ್ಷರು ವಲಯ ವ್ಯಾಪ್ತಿಯ ಪಶುಪಾಲನೆ ಇಲಾಖೆಯವರಿಗೆ ಕ್ರಮ ವಹಿಸಲು ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪ ದುರಸ್ಥಿ ಮಾಡಲು ವಿದ್ಯುತ್ ವಿಭಾಗದವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 41 ಪೀಣ್ಯ ಕೈಗಾರಿಕಾ ಪ್ರದೇಶ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ. 41 ಪೀಣ್ಯ ಕೈಗಾರಿಕಾ ಪ್ರದೇಶ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧಿಕಾರಿಗಳ ಮಾಹಿತಿಗಾಗಿ

1. ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
2. ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3. ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪೀ.ಕೈ.ಪ್ರ)ರವರ ಮಾಹಿತಿಗಾಗಿ ಕಳುಹಿಸಿದೆ
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ರವರ ಮಾಹಿತಿಗಾಗಿ ಕಳುಹಿಸಿದೆ
7. ಸಹಾಯಕ ಕಾರ್ಯಪಾಲಕ ಅಭಿಯಂತರರು (SWD) ರವರ ಮಾಹಿತಿಗಾಗಿ ಕಳುಹಿಸಿದೆ
8. ಸಹಾಯಕ ಕಾರ್ಯಪಾಲಕ ಅಭಿಯಂತರರು (BWSSB)ರವರ ಮಾಹಿತಿಗಾಗಿ ಕಳುಹಿಸಿದೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರ ಮಾಹಿತಿಗಾಗಿ ಕಳುಹಿಸಿದೆ
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) ರವರ ಮಾಹಿತಿಗಾಗಿ ಕಳುಹಿಸಿದೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಎನ್-4 ಪೀಣ್ಯ ರವರ ಮಾಹಿತಿಗಾಗಿ ಕಳುಹಿಸಿದೆ

Scanned by CamScanner